# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194,

## ವಾರ್ಡ್ ಕಛೇರಿಯಲ್ಲಿ ದಿನಾಂಕ: 21-01-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

| ಹಾಜರಿದ್ದವರು |
|---|
| 1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು. |
| 2. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.194, ಗೊಟ್ಟಿಗೆರೆ. |
| 3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ. |
| 4. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 5. ಅರಣ್ಯ ಸಂರಕ್ಷಣಾಧಿಕಾರಿ, ಗೊಟ್ಟಿಗೆರೆ. |
| 6. ಡಾ. ಸ್ಫೂತಿ ಗೊಟ್ಟಿಗೆರೆ ವಾರ್ಡ್. |
| 7. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 194, ಗೊಟ್ಟಿಗೆರೆ. |
| 8. ಕಿರಿಯ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ. |
| 9. ತೋಟಗಾರಿಗೆ ಸಹಾಯಕರು, ಗೊಟ್ಟಿಗೆರೆ |
| 10. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.194, ಗೊಟ್ಟಿಗೆರೆ |
| ಸ್ಥಳೀಯ ಸಂಘ ಸದಸ್ಯರು:- |
| 1. ಅಧ್ಯಕ್ಷರು, ರಾಯಲ್ ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ. |
| 2. ಅಧ್ಯಕ್ಷರು, ಸೌತ್ ಅವೆನ್ಯೂ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ |
| 3. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್. |
| 4. ಅಧ್ಯಕ್ಷರು, ಹಿಮಗಿರಿ ಮೆಡೋಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ. |
| 5. ಅಧ್ಯಕ್ಷರು, ಜೆ.ಪಿ ನಗರ, 9ನೇ ಹಂತ, 7ನೇ ಬ್ಲಾಕ್ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ. |
| 6. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ |

ದಿನಾಂಕ: 21-01-2022 ರಂದು ಮಧ್ಯಾಹ್ನ 03:30 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿಲಾಯಿತು.

1. **ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.**

   ವಾರ್ಡ್ ವ್ಯಾಪ್ತಿಯಲ್ಲಿ ಸದರಿ ಕೋವಿಡ್-19 ಪ್ರಕರಣಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಸದರಿ ಸಕ್ರಿಯ ಪ್ರಕರಣಗಳು 74 ಇದ್ದು, ಒಟ್ಟು ಸಕ್ರಿಯ ಪ್ರಕರಣಗಳು 793 ಇದ್ದು, ನಿಯಂತ್ರಣ ಕಾರ್ಯಕ್ರಮವನ್ನು ತೀವ್ರಗತಿಯಲ್ಲಿ ನಡೆಸುತ್ತಿದ್ದು ಪರೀಕ್ಷಾ ಮಾದರಿ ಸಂಗ್ರಹಣೆಯನ್ನು ಹೆಚ್ಚಿಸಿದ್ದು ಸದರಿ ವಾರ್ಡ್ ನಲ್ಲಿ 4 ಮಾದರಿ ಸಂಗ್ರಹಣೆ ತಂಡಗಳು ಕರ್ತವ್ಯ ನಿರ್ವಹಿಸುತ್ತಿದ್ದು, ದೈನಂದಿನ 271 ಮಾದರಿ ಸಂಗ್ರಹಣೆಯ ಗುರಿಯನ್ನು ನೀಡಲಾಗಿದ್ದು ಸದರಿ ನೀಡಲಾಗಿರುವ ಗುರಿ ಯ ಅನುಸಾರ ಸಂಗ್ರಹಿಸಲಾಗುತ್ತಿದೆ ಮತ್ತು ಲಸಿಕಾ ಕಾರ್ಯಕ್ರಮವನ್ನು ವಾರ್ಡ್ ನ ಎಲ್ಲಾ ಸ್ಥಳಗಳಲ್ಲು ಸ್ಥಳೀಯ ಮುಖಂಡರುಗಳು ಮತ್ತು ನಿವಾಸಿಗಳ ಸಂಘ ಸಂಸ್ಥೆಗಳ ಸಹಕಾರದೊಂದಿಗೆ ನಡೆಸಲಾಗುತ್ತಿದೆ.

Total No. of Vaccination done till now: 93889
Total No. of Vaccinated aged(45) above: 35598
Total No. of Vaccinated aged(18) above: 58291

1st Dose Vaccinated for 45+age : 16789
2nd Dose Vaccinated for 45+age : 18809
1st Dose Vaccinated for 18+age : 28660
2nd Dose Vaccinated for 18+age : 29631

2. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.

(I) ಪಾಲಿಕೆಯ ಆಟೋ ಟಿಪ್ಪರ್ ಒಂದರಲ್ಲಿ ಶೇಖರಿಸಿದ್ದ ಘನತ್ಯಾಜ್ಯವನ್ನು ಅಂಜನಾಪುರ ರಸ್ತೆಯಲ್ಲಿರುವ ಚರಂಡಿಯಲ್ಲಿ ಎಸೆದಿರುವ ಬಗ್ಗೆ ಪರಿವರ್ತನಾ ಸಂಘದ ಅಧ್ಯಕ್ಷರು ಮಾಹಿತಿ ನೀಡಿದರು, ಹಿರಿಯ ಆರೋಗ್ಯ ಪರಿವೀಕ್ಷಕರು ಸದರಿ ದೂರಿನ ಬಗ್ಗೆ ನಿಯಮಾನುಸಾರ ಕ್ರಮವಿಡಲು ಹಾಗೂ ಮುಂದಿನ ಸಭೆಯಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿ ನೀಡಲು ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಗಾಯಾತ್ರಿ ತಪೋವನಾ, ಕ್ರಿಸ್ಟಲ್ ಬೆರಿಲ್ ಅಪಾರ್ಟ್ಮೆಂಟ್ ರ ಎದುರು ದುರಸ್ಥಿಗೊಂಡಿರುವ ಕಂಬಗಳನ್ನು ತೆರುವುಗೊಳಿಸಲಾಗಿದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ತಿಳಿಸಿದರು.

(II) ಗೊಟ್ಟಿಗೆರೆ ವಾರ್ಡ್ ವ್ಯಾಪ್ತಿಯಲ್ಲಿ ಭೂಗತ ಕೇಬಲ್ ಕಾಮಗಾರಿ ಚಾಲ್ತಿಯಲ್ಲಿದ್ದು ಸುಮಾರು ಒಂದು ತಿಂಗಳ ಅವಧಿಯಲ್ಲಿ ಮುಕ್ತಾಯಗೊಳ್ಳುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ತಿಳಿಸಿದರು.

(III) ಹಿಮಗಿರಿ ಮೆಡೋಸ್ ಬಡಾವಣೆಯಲ್ಲಿ Cabling ಕಾರ್ಯವು ನಿಧಾನವಾಗಿ ಸಾಗುತ್ತಿದ್ದು ಸದರಿ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಲು ತಿಳಿಸಲಾಯಿತು.

(IV) ಸೌತ್ ಅವೆನ್ಯೂ ಬಡಾವಣೆಯಲ್ಲಿರುವ ಟ್ರಾನ್ಸ್‌ಫಾರ್ಮರ್‌ನ ದುರಸ್ಥಿ ಕಾರ್ಯವನ್ನು ಕೈಗೊಂಡಿರುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರು ತಿಳಿಸಿದರು.

4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಸೌತ್ ಅವೆನ್ಯೂ ಬಡಾವಣೆಯಲ್ಲಿ ಒಳಚರಂಡಿ ಸಂಪರ್ಕದ ಮಿಸ್ಸಿಂಗ್ ಲಿಂಕ್ಸ್ ಕಾರ್ಯವನ್ನು ಕೈಗೊಳ್ಳುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ವಾರ್ಡ್ ಅಭಿಯಂತರರೊಂದಿಗೆ ಸ್ಥಳ ಪರಿಶೀಲಿಸಿ ಅಗತ್ಯಕ್ರಮವಹಿಸುವುದಾಗಿ ತಿಳಿಸಿದರು.

(II) ಗೊಟ್ಟಿಗೆರೆ ವಾರ್ಡ್ ವ್ಯಾಪ್ತಿಯಲ್ಲಿ ನಿಯತಕಾಲಿಕವಾಗಿ ಕೈಗೊಳ್ಳುತ್ತಿರುವ ಕುಡಿಯುವ ನೀರಿನ ಪರಿಕ್ಷಾ ಫಲಿತಾಂಶ ವರದಿಯನ್ನು ನೀಡಲು ಹಲವು ಸಭೆಗಳಲ್ಲಿ ತಿಳಿಸಿದರೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಕ್ರಮವಹಿಸಿರುವುದಿಲ್ಲ. ವಿಷಯವು ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿರುವುದರಿಂದ ಪರೀಕ್ಷಾ ವರದಿಗಳನ್ನು ನಿಯತಕಾಲಿಕವಾಗಿ ಕಡ್ಡಾಯವಾಗಿ ಹಂಚಿಕೊಳ್ಳಲು ಸೂಚನೆ ನೀಡಲಾಗಿದೆ.

(III) ಜೆ.ಪಿ.ನಗರ, 9ನೇ ಹಂತ, 7ನೇ ಬ್ಲಾಕ್ ರಲ್ಲಿ ಮ್ಯಾನ್ಹೋಲ್ ಮುಚ್ಚಳಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿರುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಸಭೆಗೆ ತಿಳಿಸಿದರು.

(IV) ಸುಬ್ಬರಾಯನ ಕೆರೆಗೆ ಒಳಚರಂಡಿ ನೀರು ಹರಿಯುತ್ತಿರುವುದರ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ಈಗಾಗಲೇ ಸ್ಥಳ ಪರಿಶೀಲಿಸಿದ್ದು, ಪಾಲಿಕೆಯು ಸದ್ಯದಲ್ಲಿಯೇ ಸದರಿ ಕೆರೆಯ Dewatering ಕಾರ್ಯವನ್ನು ಕೈಗೊಳ್ಳುವುದಾಗಿ ಹಾಗೂ ಅದೇ ಸಂದರ್ಭದಲ್ಲಿ Manhole ಗಳನ್ನು ಎತ್ತರಿಸುವ ಕಾರ್ಯವನ್ನು ಕೈಗೊಳ್ಳುವುದಾಗಿ ತಿಳಿಸಿದರು. ಪಾಲಿಕೆ ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯ ಅಭಿಯಂತರರು ಸಮನ್ವಯದೊಂದಿಗೆ ಸದರಿ ದುರಸ್ಥಿ ಕಾರ್ಯವನ್ನು ಕೈಗೊಳ್ಳಲು ಸೂಚಿಸಲಾಯಿತು.

(V) ಬನ್ನೇರುಘಟ್ಟ ಮುಖ್ಯ ರಸ್ತೆಯಲ್ಲಿರುವ ಸೋಲಾರಿಸ್ ಅಪಾರ್ಟ್‌ಮೆಂಟ್ ಹಾಗೂ ಗಾರ್ಮೆಂಟ್ಸ್ ಕಾರ್ಖಾನೆ ರವರು ಪಕ್ಕದಲ್ಲಿರುವ ಹಿಮಗಿರಿ ಮೆಡೋಸ್ ಕಾಂಪೌಂಡ್ ಗೋಡೆಯಲ್ಲಿ ರಂಧ್ರ ಮಾಡಿ ತ್ಯಾಜ್ಯ ನೀರನ್ನು ಬಿಡುತ್ತಿರುವ ಸಂಬಂಧ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಹಾಗೂ ಪಾಲಿಕೆಯ ಆರೋಗ್ಯ ಪರಿವೀಕ್ಷಕರು ಕೂಡಲೆ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

5. ರಾಯಲ್ ಕೌಂಟಿ ಬಡಾವಣೆಯಲ್ಲಿ ಕಳ್ಳತನ ಹೆಚ್ಚಾಗುತ್ತಿರುವ ಬಗ್ಗೆ ಪರಿವರ್ತನಾ ಸಂಘದ ಅಧ್ಯಕ್ಷರು ಈಗಾಗಲೇ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಲು ಹೋಗಿದ್ದು ದೂರು ದಾಖಲಾಗದಿರುವ ಬಗ್ಗೆ ತಿಳಿಸಿದರು, ವಾರ್ಡ್ ವ್ಯಾಪ್ತಿಯ ಪೊಲೀಸ್ ಇನ್ಸ್‌ಪೆಕ್ಟರ್ ರವರನ್ನು ಮುಂದಿನ ಸಭೆಗೆ ಹಾಜರಾಗುವಂತೆ ಕೋರಲು ಸದಸ್ಯ ಕಾರ್ಯದರ್ಶಿಗಳಿಗೆ ತಿಳಿಸಲಾಯಿತು.

6. ರಸ್ತೆ ಬದಿ ಹಾಗೂ ಮೀಡಿಯನ್ಸ್ ನಲ್ಲಿ ನೆಟ್ಟಿರುವ ಗಿಡಗಳಿಗೆ ನಿಯತಕಾಲಿಕವಾಗಿ ನೀರು ಹಾಕುವ ಕಾರ್ಯವನ್ನು ಕೈಗೊಳ್ಳಲು ಅರಣ್ಯ ಅಧಿಕಾರಿಗಳಿಗೆ ಸೂಚಿಸಲಾಯಿತು.

7. ಒಂಟಿಮನೆ ಯೋಜನೆಯಲ್ಲಿ ಸ್ವೀಕೃತವಾಗಿರುವ ಈ ಕೆಳಕಂಡ ಅರ್ಜಿಗಳನ್ನು ವಲಯದ ಕಲ್ಯಾಣ ವಿಭಾಗಕ್ಕೆ ಸಲ್ಲಿಸಲು ಹಾಗೂ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲು ಸಭೆಯಲ್ಲಿ ಸೂಚಿಸಲಾಯಿತು.

(I) ಶ್ರೀಮತಿ ಲಕ್ಷ್ಮಿ w/o ರಾಮಯ್ಯ
#501/ಎ, 12ನೇ ಅಡ್ಡ ರಸ್ತೆ, ವೀವರ್ಸ್ ಕಾಲೋನಿ
ರಾಮಲಿಂಗೇಶ್ವರ ದೇವಸ್ಥಾನ ಹತ್ತಿರ, ಪಿಳ್ಳಗಾನಹಳ್ಳಿ, ಗೊಟ್ಟಿಗೆರೆ.

(II) ಶ್ರೀ ಡಿ. ರವಿ
#257/1, 9ನೇ ಅಡ್ಡರಸ್ತೆ, ಮಾರುತಿ ಬಡಾವಣೆ
ವೀವರ್ಸ್ ಕಾಲೋನಿ, ಗೊಟ್ಟಿಗೆರೆ.

(III) ಶ್ರೀಮತಿ ಮಂಜುಳ w/o ಲೇಟ್ ರಾಮಣ್ಣ
#145, 8ನೇ ಅಡ್ಡರಸ್ತೆ,
ವೀವರ್ಸ್ ಕಾಲೋನಿ, ಗೊಟ್ಟಿಗೆರೆ

**8.** ರಸ್ತೆ ಕಾಮಗಾರಿ ಹಾಗೂ ರಸ್ತೆ ಪಾದಚಾರಿ ಬಗ್ಗೆ.

(I) ಬೊಹರಾ ಬಡಾವಣೆಯಲ್ಲಿ ರಸ್ತೆ ಡಾಂಬರೀಕರಣ ಕಾರ್ಯವು ಸ್ಥಗಿತಗೊಂಡಿರುವ ಬಗ್ಗೆ ಮಾತನಾಡುತ್ತಾ ಸದರಿ ಕಾಮಗಾರಿಯು ಮುಂದಿನ ವಾರದಲ್ಲಿ ಪುನರಾರಂಭವಾಗುವುದಾಗಿ ವಾರ್ಡ್ ಅಭಿಯಂತರರು ಸಭೆಗೆ ತಿಳಿಸಿದರು.

**ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.